# ಪೌಲನು ಗಲಾತ್ಯರಿಗೆ ಬರೆದ ಪತ್ರ

## ಮುನ್ನುಡಿ

ಯೇಸುಸ್ವಾಮಿಯನ್ನು ಕುರಿತಾದ ಶುಭಸಂದೇಶ ಭರದಿಂದ ಪ್ರಚಾರವಾಗುತ್ತಿತ್ತು. ಯೆಹೂದ್ಯರಲ್ಲದ ಜನರು ಹೆಚ್ಚಿನ ಸಂಖ್ಯೆಯಲ್ಲಿ ಅದನ್ನು ಅಂಗೀಕರಿಸತೊಡಗಿದರು. ಆಗ, ಈ ಹೊಸ ಕ್ರೈಸ್ತರು ಮೋಶೆಯ ಧರ್ಮಶಾಸ್ತ್ರಕ್ಕೆ ಬದ್ಧರೇ ಎಂಬ ಪ್ರಶ್ನೆ ತಲೆಯೆತ್ತಿಕೊಂಡಿತು. ಅದಕ್ಕೆ ಪೌಲನು, "ಕ್ರಿಸ್ತಸ್ಥನಾಗಿ ಬಾಳಲಿಚ್ಛಿಸುವವನಿಗೆ ಅತ್ಯಗತ್ಯವಾದುದು ವಿಶ್ವಾಸ. ವಿಶ್ವಾಸದ ಮೂಲಕ ಪ್ರತಿಯೊಬ್ಬನೂ ದೇವರೊಂದಿಗೆ ಸತ್ಸಂಬಂಧವನ್ನು ಹೊಂದುತ್ತಾನೆ; ಅಂಥವನು ಮೋಶೆಯ ಧರ್ಮಶಾಸ್ತ್ರಕ್ಕೆ ಬದ್ಧನಲ್ಲ," ಎಂದು ಉತ್ತರಿಸುತ್ತಾನೆ.

ಗಲಾತ್ಯ ಎಂಬುದು ರೋಮ್ ಸಾಮ್ರಾಜ್ಯಕ್ಕೆ ಒಳಪಟ್ಟ ಅಂದಿನ ಏಷ್ಯಾಮೈನರ್ ಸೀಮೆಯ ಒಂದು ಪ್ರಾಂತ್ಯ. ಇಲ್ಲಿಗೆ ಬಂದಿದ್ದ ಯೆಹೂದ್ಯ ಕ್ರೈಸ್ತರಲ್ಲಿ ಕೆಲವರು ಪೌಲನ ವಿರುದ್ಧ, "ಒಬ್ಬನು ದೇವರೊಂದಿಗೆ ಸತ್ಸಂಬಂಧವನ್ನು ಪಡೆಯಬೇಕಾದರೆ, ಅಂಥವನು ಮೋಶೆಯ ಧರ್ಮಶಾಸ್ತ್ರಕ್ಕೆ ಬದ್ಧನಾಗಲೇಬೇಕು," ಎಂದು ವಾದಿಸುತ್ತಿದ್ದರು. ಈ ತಪ್ಪುಬೋಧನೆಗೆ ಮರುಳಾಗಿದ್ದವರನ್ನು ವಿಶ್ವಾಸದ ಮಾರ್ಗಕ್ಕೆ ತರಲು ಪೌಲನು ಈ ಪತ್ರವನ್ನು ಬರೆಯಬೇಕಾಯಿತು.

ಪೌಲನಿಗೆ ಪ್ರೇಷಿತನಾಗಲು ಕರೆಬಂದದ್ದು ಮಾನವರಿಂದ ಅಲ್ಲ, ದೇವರಿಂದಲೇ; ಆದುದರಿಂದ 'ಕ್ರಿಸ್ತ ಯೇಸುವಿನ ಪ್ರೇಷಿತ' ಎನಿಸಿಕೊಳ್ಳುವ ಹಕ್ಕು ತನಗಿದೆ ಎಂದು ಮೊಟ್ಟಮೊದಲು ಪೌಲನು ಸಮರ್ಥಿಸುತ್ತಾನೆ. ಯೆಹೂದ್ಯೇತರರೇ ತನ್ನ ಬೋಧನಾರ್ಥಿಗಳೆಂದು ವಾದಿಸುತ್ತಾನೆ. ಅನಂತರ 'ಒಬ್ಬನು ದೇವರೊಂದಿಗೆ ಸತ್ಸಂಬಂಧವನ್ನು ಹೊಂದುವುದು ವಿಶ್ವಾಸದಿಂದ,' ಎಂಬ ತನ್ನ ನಿಲುವನ್ನು ಪವಿತ್ರಗ್ರಂಥದ ಕೆಲವು ಉದಾಹರಣೆಗಳಿಂದ ಪುಷ್ಟೀಕರಿಸುತ್ತಾನೆ. ಪ್ರೀತಿಯೇ ಕ್ರೈಸ್ತವಿಶ್ವಾಸದ ಫಲ, ಯೇಸುವಿನ ಮೇಲೆ ನಮಗಿರುವ ಪ್ರೀತಿ, ಕ್ರಿಸ್ತೀಯ ಸನ್ನಡತೆಯಲ್ಲಿ ವಿಕಾಸಗೊಳ್ಳುತ್ತದೆ ಎಂಬುದನ್ನು ವಿವರಿಸುತ್ತಾನೆ.

### ಪರಿವಿಡಿ


| | | |
|---|---|---|
| ಪೀಠಿಕೆ | – | 1.1 – 1.10 |
| ಪೌಲನ ಪ್ರೇಷಿತಾಧಿಕಾರ | – | 1.11 – 2.21 |
| ದೈವಾನುಗ್ರಹದ ಸಂದೇಶ | – | 3.1 – 4.31 |
| ಕ್ರೈಸ್ತಸ್ವಾತಂತ್ರ್ಯ ಮತ್ತು ಹೊಣೆಗಾರಿಕೆ | – | 5.1 – 6.10 |
| ಸಮಾಪ್ತಿ | – | 6.11 – 6.18 |


### ಪೀಠಿಕೆ

**1** ಗಲಾತ್ಯದಲ್ಲಿರುವ ಸಭೆಗಳಿಗೆ, ಪ್ರೇಷಿತನಾದ ಪೌಲನು ಎಲ್ಲಾ ಸಹೋದರರೊಡನೆ ಸೇರಿ ಬರೆಯುವ ಪತ್ರ:
2ಮಾನವರಿಂದಾಗಲಿ ಮಾನವ ಅಧಿಕಾರದಿಂದಾಗಲಿ ನಾನು ಪ್ರೇಷಿತನಾಗಿರದೆ ಯೇಸುಕ್ರಿಸ್ತರಿಂದಲೂ ಮತ್ತು
ಅವರನ್ನು ಮರಣದಿಂದ ಎಬ್ಬಿಸಿದ ತಂದೆಯಾದ ದೇವರಿಂದಲೂ ಪ್ರೇಷಿತನಾಗಿರುತ್ತೇನೆ.

3 ನಮ್ಮ ತಂದೆಯಾದ ದೇವರಿಂದಲೂ ಪ್ರಭು ಯೇಸುಕ್ರಿಸ್ತರಿಂದಲೂ ನಿಮಗೆ ಕೃಪಾಶೀರ್ವಾದವೂ
ಶಾಂತಿಸಮಾಧಾನವೂ ಲಭಿಸಲಿ!
4 ಯೇಸುಕ್ರಿಸ್ತರು, ನಮ್ಮ ತಂದೆಯಾದ ದೇವರ ಚಿತ್ತಕ್ಕನುಸಾರವಾಗಿ, ನಮ್ಮನ್ನು ಸದ್ಯದ
ದುಷ್ಟಕಾಲದಿಂದ ಬಿಡುಗಡೆ ಮಾಡುವುದಕ್ಕಾಗಿ ಹಾಗು ನಮ್ಮ ಪಾಪಗಳ ಪರಿಹಾರಕ್ಕಾಗಿ ತಮ್ಮನ್ನೇ ಬಲಿಯಾಗಿ
ಅರ್ಪಿಸಿದರು. 5ದೇವರಿಗೆ ಯುಗಯುಗಾಂತರಕ್ಕೂ ಸ್ತುತಿಸ್ತೋತ್ರ ಸಲ್ಲಲಿ! ಆಮೆನ್.

## ಏಕೈಕ ಶುಭಸಂದೇಶ

6 ಕ್ರಿಸ್ತಯೇಸುವಿನ ಅನುಗ್ರಹದಿಂದ ನಿಮ್ಮನ್ನು ಕರೆದ ದೇವರನ್ನು ನೀವಿಷ್ಟು ಬೇಗನೆ ತ್ಯಜಿಸಿ,
ಬೇರೊಂದು 'ಶುಭಸಂದೇಶ'ವನ್ನು ಅಂಗೀಕರಿಸುತ್ತಿರುವಿರೆಂದು ಕೇಳಿ ನನಗೆ ಆಶ್ಚರ್ಯವಾಗುತ್ತಿದೆ.
7ವಾಸ್ತವವಾಗಿ, ಬೇರೆ ಯಾವ ಶುಭಸಂದೇಶವೂ ಇಲ್ಲ. ಆದರೆ ಕೆಲವರು ನಿಮ್ಮಲ್ಲಿ ಗೊಂದಲವೆಬ್ಬಿಸಿ,
ಕ್ರಿಸ್ತಯೇಸುವಿನ ಶುಭಸಂದೇಶವನ್ನು ಮಾರ್ಪಡಿಸಲು ಯತ್ನಿಸುತ್ತಾ ಇದ್ದಾರೆ. 8ನಾವು ನಿಮಗೆ ಬೋಧಿಸಿದ
ಶುಭಸಂದೇಶಕ್ಕೆ ವಿರುದ್ಧವಾದ ಸಂದೇಶವನ್ನು ನಾವೇ ಆಗಲಿ, ಸ್ವರ್ಗದಿಂದ ಇಳಿದ ದೇವದೂತನೇ ಆಗಲಿ,
ಯಾರೇ ಆಗಲಿ ಬೋಧಿಸಿದರೆ ಅವನು ಶಾಪಗ್ರಸ್ತನಾಗಲಿ! 9ನೀವು ಅಂಗೀಕರಿಸಿದ ಶುಭಸಂದೇಶಕ್ಕೆ
ವಿರುದ್ಧವಾದ ಸಂದೇಶವನ್ನು ಸಾರುವವನು ಶಾಪಗ್ರಸ್ತನಾಗಲಿ ಎಂದು ನಾನು ಮೊದಲೇ ಹೇಳಿದಂತೆ,
ಮತ್ತೊಮ್ಮೆ ಒತ್ತಿ ಹೇಳುತ್ತೇನೆ.
10 ಇದರಿಂದ ನಾನು ಯಾರನ್ನು ಒಲಿಸಿಕೊಳ್ಳಲು ಯತ್ನಿಸುತ್ತಿದ್ದೇನೆ? ಮಾನವರನ್ನೋ?
ದೇವರನ್ನೋ? ನಾನು ಮಾನವರ ಮೆಚ್ಚುಗೆಯನ್ನು ಗಳಿಸಿಕೊಳ್ಳಲು ಯತ್ನಿಸುತ್ತಿಲ್ಲ; ನಾನಿನ್ನೂ ಜನರ
ಮೆಚ್ಚುಗೆಯನ್ನು ಗಳಿಸುವವನೇ ಆಗಿದ್ದರೆ ಕ್ರಿಸ್ತಯೇಸುವಿನ ದಾಸನಾಗಿರಲು ಸಾಧ್ಯವೇ ಇಲ್ಲ.

## ಪ್ರೇಷಿತನಾದ ಪೌಲ

11 ಪ್ರಿಯ ಸಹೋದರರೇ, ನಾನು ಬೋಧಿಸಿದ ಶುಭಸಂದೇಶವು ಮಾನವ ಕಲ್ಪಿತ ಸಂದೇಶ
ಅಲ್ಲವೆಂದು ನಿಮಗೆ ಮನದಟ್ಟು ಮಾಡಲು ಬಯಸುತ್ತೇನೆ. 12ಈ ಶುಭಸಂದೇಶವನ್ನು ನಾನು ಮನುಷ್ಯರಿಂದ
ಪಡೆಯಲಿಲ್ಲ; ಅದನ್ನು ಯಾರಿಂದಲೂ ಕಲಿತುಕೊಳ್ಳಲಿಲ್ಲ; ಯೇಸುಕ್ರಿಸ್ತರೇ ನನಗದನ್ನು ಶ್ರುತಪಡಿಸಿದರು.
13 ಹಿಂದೊಮ್ಮೆ ನಾನು ಯೆಹೂದ್ಯ ಮತಸ್ಥನಾಗಿದ್ದಾಗ ನನ್ನ ನಡತೆ ಹೇಗಿತ್ತೆಂದು ನೀವು ಚೆನ್ನಾಗಿ
ಬಲ್ಲಿರಿ. ಆಗ ನಾನು ದೇವರ ಸಭೆಯನ್ನು ಕ್ರೂರವಾಗಿ ಹಿಂಸಿಸಿದೆ; ಅದನ್ನು ಧ್ವಂಸಮಾಡಲು ಪ್ರಯತ್ನಿಸಿದೆ.
14ಇದಲ್ಲದೆ, ನಾನು ನನ್ನ ಪೂರ್ವಜರ ಮತಸಂಪ್ರದಾಯಗಳಲ್ಲಿ ಅತ್ಯಧಿಕ ನಿಷ್ಠೆಯುಳ್ಳವನಾಗಿದ್ದೆ. ಯೆಹೂದ್ಯ
ಮತಾಚರಣೆಯಲ್ಲಿ ಅನೇಕ ಸಮವಯಸ್ಕರಿಗಿಂತ ಎಷ್ಟೋ ಮುಂದಾಗಿದ್ದೆ.
15 ಆದರೆ, ನಾನಿನ್ನೂ ತಾಯಿಯ ಗರ್ಭದಲ್ಲಿ ಇದ್ದಾಗಲೇ ದೇವರು ನನ್ನನ್ನು ತಮ್ಮ ಅನುಗ್ರಹದಿಂದ
ಆರಿಸಿಕೊಂಡು ತಮ್ಮ ಸೇವೆಗೆ ಕರೆದರು. 16ನಾನು ಯೆಹೂದ್ಯರಲ್ಲದವರಿಗೆ ಶುಭಸಂದೇಶವನ್ನು
ಸಾರಬೇಕೆಂದು ದೇವರು ತಮ್ಮ ಮಗನನ್ನು ನನಗೆ ಶ್ರುತಪಡಿಸಿದರು. ಆಗ ಸಲಹೆಗಾಗಿ ನಾನು ಯಾರ
ಬಳಿಗೂ ಹೋಗಲಿಲ್ಲ. 17ನನಗಿಂತ ಮುಂಚಿತವಾಗಿ ಪ್ರೇಷಿತರಾದವರನ್ನು ಕಾಣಲೆಂದು ನಾನು
ಜೆರುಸಲೇಮಿಗೂ ಹೋಗಲಿಲ್ಲ. ಬದಲಿಗೆ, ನೇರವಾಗಿ ಅರೇಬಿಯಾಕ್ಕೆ ಹೋದೆ. ಅಲ್ಲಿಂದ ದಮಸ್ಕಸ್ ನಗರಕ್ಕೆ
ಹಿಂದಿರುಗಿದೆ. 18ಮೂರು ವರ್ಷಗಳ ನಂತರವೇ ಕೇಫನನ್ನು ಕಂಡು ಮಾತನಾಡಲು ಜೆರುಸಲೇಮಿಗೆ
ಹೋದೆ; ಹದಿನೈದು ದಿನ ಆತನೊಂದಿಗೆ ತಂಗಿದ್ದೆ. 19ಆಗ, ಉಳಿದ ಪ್ರೇಷಿತರಲ್ಲಿ ಪ್ರಭುವಿನ ಸಹೋದರ
ಯಕೋಬನಲ್ಲದೆ ಬೇರೆ ಯಾವ ಪ್ರೇಷಿತರನ್ನೂ ನಾನು ಕಾಣಲಿಲ್ಲ. 20ನಾನು ನಿಮಗೆ ಬರೆಯುವ
ಸಂಗತಿಗಳು ಸುಳ್ಳಲ್ಲ ಎಂಬುದಕ್ಕೆ ದೇವರೇ ಸಾಕ್ಷಿ. 21ಅನಂತರ ನಾನು ಸಿರಿಯ ಮತ್ತು ಸಿಲಿಸಿಯ
ಪ್ರಾಂತ್ಯಗಳಿಗೆ ಹೋದೆ. 22ಆಗ ಜುದೇಯ ಪ್ರಾಂತ್ಯದಲ್ಲಿದ್ದ ಕ್ರೈಸ್ತ ಸಭೆಗಳಿಗೆ ನನ್ನ ಪರಿಚಯವಾಗಿರಲಿಲ್ಲ.
23'ಹಿಂದೊಮ್ಮೆ ನಮ್ಮನ್ನು ಹಿಂಸಿಸುತ್ತಿದ್ದವನು, ತಾನು ನಾಶ ಮಾಡಲೆತ್ನಿಸಿದ ವಿಶ್ವಾಸವನ್ನೇ ಈಗ ಪ್ರಚಾರ
ಮಾಡುತ್ತಿದ್ದಾನೆ', ಎಂಬ ಸುದ್ದಿಯನ್ನು ಮಾತ್ರ ಕೇಳಿದ್ದರು. 24ಈ ಕಾರಣ ನನ್ನನ್ನು ಕುರಿತು ಅವರು
ದೇವರನ್ನು ಕೊಂಡಾಡುತ್ತಿದ್ದರು.

## ಪೌಲನು ಮತ್ತು ಇತರ ಪ್ರೇಷಿತರು

**2** ಹದಿನಾಲ್ಕು ವರ್ಷಗಳು ಕಳೆದ ಮೇಲೆ ತೀತನನ್ನು ಕರೆದುಕೊಂಡು ಬಾರ್ನಬನ ಜೊತೆಯಲ್ಲಿ ಪುನಃ
ಜೆರುಸಲೇಮಿಗೆ ಹೋದೆ. 2ದೇವಪ್ರೇರಣೆಗೆ ಅನುಸಾರವಾಗಿಯೇ ಅಲ್ಲಿಗೆ ಹೋದೆ. ಅನ್ಯಧರ್ಮೀಯರಿಗೆ
ನಾನು ಸಾರುತ್ತಿದ್ದ ಸಂದೇಶ ಏನೆಂಬುದನ್ನು ಅಲ್ಲಿದ್ದ ಕೆಲವು ಗಣ್ಯವ್ಯಕ್ತಿಗಳಿಗೆ ಪ್ರತ್ಯೇಕವಾಗಿ ತಿಳಿಸಿದೆ.
ಅದುವರೆಗೆ ನಾನು ಪಟ್ಟ ಶ್ರಮವಾಗಲಿ ಈಗ ಪಡುತ್ತಿರುವ ಶ್ರಮವಾಗಲಿ ವ್ಯರ್ಥವಾಗಬಾರದೆಂಬ
ಉದ್ದೇಶದಿಂದ ಹೀಗೆ ಮಾಡಿದೆ. 3ಆಗ ನನ್ನ ಸಂಗಡವಿದ್ದ ತೀತನು ಗ್ರೀಕನಾಗಿದ್ದರೂ ಅವನಿಗೆ ಸುನ್ನತಿ
ಆಗಬೇಕೆಂದು ಯಾರೂ ಒತ್ತಾಯಪಡಿಸಲಿಲ್ಲ. 4ಗೂಢಾಚಾರರಾಗಿ ಬಂದಿದ್ದ ಕೆಲವು ಸಹೋದರರು
ಅಲ್ಲಿದ್ದುದರಿಂದ ಒತ್ತಾಯ ನಡೆದೀತೆಂಬ ಶಂಕೆ ಇತ್ತು. ಇವರು ಕ್ರಿಸ್ತಯೇಸುವಿನಲ್ಲಿ ನಮಗಿರುವ
ಮುಕ್ತಸ್ವಾತಂತ್ರ್ಯದ ಬಗ್ಗೆ ಗುಟ್ಟಾಗಿ ವಿಚಾರಿಸಲು ಬಂದಿದ್ದರು. ನಮ್ಮನ್ನು ಪುನಃ ದಾಸತ್ವದಲ್ಲಿ
ಸಿಕ್ಕಿಸಬೇಕೆಂಬುದೇ ಅವರ ಉದ್ದೇಶವಾಗಿತ್ತು. 5ಆದರೆ ನಾವು ಅವರಿಗೆ ಕ್ಷಣಮಾತ್ರವೂ ಬಿಟ್ಟುಕೊಡಲಿಲ್ಲ.
ಹೀಗೆ ನಿಮಗೋಸ್ಕರ ಶುಭಸಂದೇಶದ ಸತ್ಯಾರ್ಥವನ್ನು ಸುಭದ್ರವಾಗಿ ಇರಿಸಿದೆವು.

6 ಅಲ್ಲಿದ್ದ ಗಣ್ಯವ್ಯಕ್ತಿಗಳು ಕೂಡ (ಅವರು ಹಿಂದೆ ಎಂಥವರಾಗಿದ್ದರು ಎಂಬುದು ನನಗೆ ಮುಖ್ಯವಲ್ಲ;
ದೇವರು ಮುಖನೋಡಿ ಮಣೆ ಹಾಕುವವರಲ್ಲ) ನನಗೆ ಯಾವ ಹೊಸ ಸಲಹೆ ನೀಡಲಿಲ್ಲ. 7ಬದಲಾಗಿ,
ಯೆಹೂದ್ಯರಿಗೆ ಶುಭಸಂದೇಶವನ್ನು ಸಾರುವ ಸೇವೆಯನ್ನು ಪೇತ್ರನಿಗೆ ವಹಿಸಿಕೊಟ್ಟಂತೆಯೇ
ಯೆಹೂದ್ಯರಲ್ಲದವರಿಗೆ ಶುಭಸಂದೇಶವನ್ನು ಸಾರುವ ಸೇವಾಕಾರ್ಯವನ್ನು ದೇವರು ನನಗೆ
ವಹಿಸಿಕೊಟ್ಟಿದ್ದಾರೆ ಎಂಬುದನ್ನು ಆ ಗಣ್ಯವ್ಯಕ್ತಿಗಳು ಒಪ್ಪಿಕೊಂಡರು. 8ಹೌದು, ಯೆಹೂದ್ಯರಿಗೆ
ಪ್ರೇಷಿತನಾಗುವಂತೆ ಪೇತ್ರನನ್ನು ಪ್ರೇರೇಪಿಸಿದ ದೇವರು, ಯೆಹೂದ್ಯರಲ್ಲದವರಿಗೆ ಪ್ರೇಷಿತನಾಗಲು ನನ್ನನ್ನು
ಪ್ರೇರೇಪಿಸಿದ್ದಾರೆ. 9ನನಗೆ ಕೊಡಲಾಗಿದ್ದ ಈ ವಿಶೇಷ ವರವನ್ನು ಮನಗಂಡು ಸಭಾಸ್ತಂಭಗಳೆಂದು
ಪರಿಗಣಿತರಾದ ಯಕೋಬ, ಕೇಫ ಮತ್ತು ಯೊವಾನ್ನರು ನನಗೂ ಬಾರ್ನಬನಿಗೂ ಕೈಯಲ್ಲಿ ಕೈಯನ್ನಿಟ್ಟು
ಅನ್ಯೋನ್ಯತೆಯನ್ನು ಸೂಚಿಸಿದರು. ಅಲ್ಲದೆ, "ನೀವು ಯೆಹೂದ್ಯರಲ್ಲದವರ ಬಳಿಗೆ ಹೋಗಿರಿ, ನಾವು
ಯೆಹೂದ್ಯರ ಬಳಿಗೆ ಹೋಗುತ್ತೇವೆ," ಎಂದೂ ಹೇಳಿದರು. 10ಅವರಲ್ಲಿದ್ದ ಬಡಬಗ್ಗರಿಗೆ ಮರೆಯದೆ
ನೆರವಾಗಬೇಕೆಂಬ ಒಂದು ವಿಷಯವನ್ನು ಮಾತ್ರ ಕೇಳಿಕೊಂಡರು. ನಾನು ಮಾಡಬೇಕೆಂದು ಎಣಿಸಿದುದು
ಅದೇ ಆಗಿತ್ತು.

## ಪೇತ್ರ ಪೌಲರ ವಾಗ್ವಾದ

11 ಅದರೆ ಕೇಫನು ಅಂತಿಯೋಕ್ಯಕ್ಕೆ ಬಂದಾಗ ಆತನು ತಪ್ಪಿತಸ್ಥನೆಂಬುದು ಸಿದ್ಧವಾಗಿದ್ದುದರಿಂದ
ನಾನು ಆತನನ್ನು ಮುಖಾಮುಖಿಯಾಗಿ ಖಂಡಿಸಿದೆ. 12ಯಕೋಬನ ಕಡೆಯಿಂದ ಕೆಲವು ಸಹೋದರರು
ಬರುವುದಕ್ಕೆ ಮುಂಚೆ ಆತನು ಅನ್ಯಧರ್ಮೀಯರೊಡನೆ ಊಟ ಮಾಡುತ್ತಿದ್ದನು. ಆದರೆ ಅವರು ಬಂದ
ಮೇಲೆ ಸುನ್ನತಿ ಪರವಾದಿಗಳಿಗೆ ಅಂಜಿ ಅನ್ಯಧರ್ಮೀಯರಿಂದ ದೂರವಾದನು. 13ಅಂತೆಯೇ, ಕೇಫನ
ಸಂಗಡ ಇದ್ದ ಮಿಕ್ಕ ಯೆಹೂದ್ಯರು ಕಪಟತನದಿಂದ ವರ್ತಿಸಿದರು. ಇವರ ವರ್ತನೆಗೆ ಬಾರ್ನಬನೂ ಸಹ
ಮಾರುಹೋದನು. 14ಅವರ ಈ ನಡತೆ, ಶುಭಸಂದೇಶದ ಸತ್ಯಕ್ಕೆ ಅನುಗುಣವಾದುದಲ್ಲ ಎಂದು ನನಗೆ
ಮನದಟ್ಟಾಯಿತು. ಆಗ ನಾನು ಅವರೆಲ್ಲರ ಸಮ್ಮುಖದಲ್ಲೇ ಕೇಫನಿಗೆ: "ನೀನು ಯೆಹೂದ್ಯನಾಗಿದ್ದೂ
ಯೆಹೂದ್ಯರಂತೆ ನಡೆಯದೆ ಅನ್ಯಧರ್ಮೀಯರಂತೆ ನಡೆದುಕೊಳ್ಳುತ್ತ ಇದ್ದೀಯಲ್ಲವೇ? ಹೀಗಿರುವಲ್ಲಿ
ಅನ್ಯಧರ್ಮೀಯರು ಯೆಹೂದ್ಯರಂತೆ ನಡೆದುಕೊಳ್ಳಬೇಕೆಂದು ನೀನು ಒತ್ತಾಯಪಡಿಸುವುದಾದರೂ ಹೇಗೆ?"
ಎಂದು ಕೇಳಿದೆ.

## ವಿಶ್ವಾಸವೇ ಜೀವೋದ್ಧಾರದ ಮಾರ್ಗ

15 ನಾವಂತೂ ಹುಟ್ಟು ಯೆಹೂದ್ಯರು; ಪಾಪಿಗಳೆಂದು ಕರೆಯಲಾಗುವ ಅನ್ಯಧರ್ಮೀಯರಲ್ಲ.
16ಆದರೂ ಧರ್ಮಶಾಸ್ತ್ರದ ವಿಧಿನಿಯಮಗಳನ್ನು ಅನುಸರಿಸುವುದರಿಂದಲ್ಲ, ಕ್ರಿಸ್ತಯೇಸುವಿನಲ್ಲಿ

ವಿಶ್ವಾಸವಿಡುವುದರಿಂದ ಮಾತ್ರ ಮಾನವನು ದೇವರೊಡನೆ ಸತ್ಸಂಬಂಧವನ್ನು ಪಡೆಯುತ್ತಾನೆಂದು ಬಲ್ಲೆವು.
ದೇವರೊಡನೆ ಸತ್ಸಂಬಂಧವನ್ನು ಪಡೆಯುವ ಸಲುವಾಗಿ ನಾವೂ ಧರ್ಮಶಾಸ್ತ್ರದ ವಿಧಿನಿಯಮಗಳನ್ನು
ಬಿಟ್ಟು, ಕ್ರಿಸ್ತಯೇಸುವಿನಲ್ಲಿ ವಿಶ್ವಾಸವಿಟ್ಟಿದ್ದೇವೆ. ಧರ್ಮಶಾಸ್ತ್ರದ ವಿಧಿನಿಯಮಗಳನ್ನು ಅನುಸರಿಸುವುದರಿಂದಲೆ
ಯಾರೂ ದೇವರೊಡನೆ ಸತ್ಸಂಬಂಧಿಕರಾಗಿ ಕಂಡು ಬರುವುದಿಲ್ಲ. [17]ಕ್ರಿಸ್ತಯೇಸುವಿನ ಮುಖಾಂತರ
ದೇವರೊಡನೆ ಸತ್ಸಂಬಂಧವನ್ನು ಪಡೆಯಲು ಯತ್ನಿಸುತ್ತಿರುವ ನಾವು ಅನ್ಯಧರ್ಮೀಯರಂತೆ ಕಂಡು
ಬರುವುದಾದರೆ, ಕ್ರಿಸ್ತಯೇಸುವೇ ಪಾಪಕ್ಕೆ ಕಾರಣರೆಂದು ಹೇಳಿದಂತಾಗುತ್ತದೆ. ಆದರೆ ಅದೆಂದಿಗೂ ಆಗದು.
[18]ನಾನು ಕೆಡವಿದ್ದನ್ನೇ ಪುನಃ ಕಟ್ಟಿದರೆ ನನ್ನನ್ನು ನಾನೇ ಅಪರಾಧಿ ಎಂದು ರುಜುವಾತು
ಪಡಿಸಿದಂತಾಗುವುದಿಲ್ಲವೇ? [19]ನಾನಾದರೋ ದೇವರಿಗಾಗಿ ಜೀವಿಸುವುದಕ್ಕೋಸ್ಕರ, ಧರ್ಮಶಾಸ್ತ್ರದ
ಮೂಲಕ, ಧರ್ಮಶಾಸ್ತ್ರದ ಪಾಲಿಗೆ ಸತ್ತವನಾಗಿದ್ದೇನೆ. [20]ಕ್ರಿಸ್ತಯೇಸುವಿನೊಂದಿಗೆ ನಾನೂ
ಶಿಲುಬೆಗೇರಿಸಲಾದವನು. ಈಗ ಜೀವಿಸುವವನು ನಾನಲ್ಲ. ಕ್ರಿಸ್ತಯೇಸು ನನ್ನಲ್ಲಿ ಜೀವಿಸುತ್ತಾರೆ. ನನ್ನನ್ನು
ಪ್ರೀತಿಸಿ ನನಗಾಗಿ ಪ್ರಾಣಾರ್ಪಣೆ ಮಾಡಿದ ದೇವರ ಪುತ್ರನಲ್ಲಿ ನಾನು ಇರಿಸಿರುವ ವಿಶ್ವಾಸದಿಂದಲೇ ನಾನೀಗ
ಈ ದೇಹದಲ್ಲಿ ಜೀವಿಸುತ್ತಿದ್ದೇನೆ. [21]ದೇವರ ಅನುಗ್ರಹವನ್ನು ನಿರಾಕರಿಸುವಂಥವನು ನಾನಲ್ಲ. ಧರ್ಮಶಾಸ್ತ್ರದ
ಮೂಲಕ ದೇವರೊಡನೆ ಸತ್ಸಂಬಂಧವು ದೊರಕುವುದಾದರೆ ಕ್ರಿಸ್ತಯೇಸು ಮರಣಕ್ಕೀಡಾದುದು ನಿರರ್ಥಕವೇ
ಸರಿ.

## ಧರ್ಮಶಾಸ್ತ್ರವೋ? ಶುಭಸಂದೇಶವೋ?

**3** ಎಲೈ ಮತಿಗೆಟ್ಟ ಗಲಾತಿಯರೇ, ನಿಮ್ಮನ್ನು ಮರುಳುಗೊಳಿಸಿದವರು ಯಾರು? ಯೇಸುಕ್ರಿಸ್ತರು ಶಿಲುಬೆಯ
ಮೇಲೆ ಪ್ರಾಣಾರ್ಪಣೆ ಮಾಡಿದ್ದನ್ನು ನಿಮ್ಮ ಕಣ್ಣೆದುರಿಗೇ ಚಿತ್ರಿತಗೊಳಿಸಲಿಲ್ಲವೆ? [2]ನಿಮ್ಮ ಬಳಿ ಒಂದು
ವಿಷಯವನ್ನು ಕೇಳಲಿಚ್ಛಿಸುತ್ತೇನೆ: ನೀವು ಪವಿತ್ರಾತ್ಮರನ್ನು ಪಡೆದುದು ಹೇಗೆ? ಧರ್ಮಶಾಸ್ತ್ರದ
ವಿಧಿನಿಯಮಗಳನ್ನು ಅನುಸರಿಸಿದ್ದರಿಂದಲೋ? ಇಲ್ಲವೆ ಶುಭಸಂದೇಶವನ್ನು ಕೇಳಿ ವಿಶ್ವಾಸಿಸಿದ್ದರಿಂದಲೋ?
[3]ನೀವು ಪವಿತ್ರಾತ್ಮ ಸಂಬಂಧವಾದ ಆಧ್ಯಾತ್ಮಿಕ ಜೀವನವನ್ನು ಪ್ರಾರಂಭಿಸಿಯೂ ಈಗ ಅದನ್ನು ಕೇವಲ ದೇಹ
ಸಂಬಂಧವಾದ ವಿಧಿಯಿಂದ ಪೂರೈಸಬೇಕೆಂದಿದ್ದೀರೋ? ನೀವು ಅಷ್ಟು ಮತಿಗೆಟ್ಟವರೋ? [4]ನಿಮ್ಮ
ಅನುಭವಗಳೆಲ್ಲವೂ ವ್ಯರ್ಥವಾದುವು ಎಂದು ಹೇಳೋಣವೇ? [5]ದೇವರು ನಿಮಗೆ ಪವಿತ್ರಾತ್ಮರನ್ನು
ಪ್ರಧಾನಮಾಡಿ ಮಹತ್ಕಾರ್ಯಗಳನ್ನು ಎಸಗುತ್ತಾ ಬಂದಿದ್ದಾರೆ. ಹಾಗೆ ಮಾಡುತ್ತಿರುವುದು, ನೀವು
ಧರ್ಮಶಾಸ್ತ್ರದ ವಿಧಿನಿಯಮಗಳನ್ನು ಅನುಸರಿಸಿದ್ದರಿಂದಲ್ಲ. ಶುಭಸಂದೇಶವನ್ನು ಕೇಳಿ, ವಿಶ್ವಾಸ
ಇಟ್ಟಿರುವುದರಿಂದ.

6 ಪವಿತ್ರಗ್ರಂಥದಲ್ಲಿ ಬರೆದಿರುವಂತೆ: “ಅಬ್ರಹಾಮನು ದೇವರಲ್ಲಿ ವಿಶ್ವಾಸವಿಟ್ಟನು; ಈ ಕಾರಣ
ದೇವರು ಆತನನ್ನು ತಮ್ಮ ಸತ್ಸಂಬಂಧದಲ್ಲಿ ಇರುವುದಾಗಿ ಪರಿಗಣಿಸಿದರು.” [7]ಆದ್ದರಿಂದ ಯಾರು
ವಿಶ್ವಾಸದಿಂದ ಜೀವಿಸುತ್ತಾರೋ ಅವರೇ ಅಬ್ರಹಾಮನ ಮಕ್ಕಳೆಂದು ತಿಳಿದುಕೊಳ್ಳಿ. [8]ಈ ವಿಶ್ವಾಸದ
ಮೂಲಕವೇ ಅನ್ಯಧರ್ಮೀಯರನ್ನು ಕೂಡ ದೇವರು ತಮ್ಮ ಸತ್ಸಂಬಂಧದಲ್ಲಿ ಇರಿಸಿಕೊಳ್ಳುತ್ತಾರೆ, ಎಂದು
ಪವಿತ್ರಗ್ರಂಥದಲ್ಲಿ ಮೊದಲೇ ಬರೆಯಲಾಗಿತ್ತು. ಈ ಕಾರಣದಿಂದಲೇ ಅಬ್ರಹಾಮನಿಗೆ, “ನಿನ್ನ
ಮುಖಾಂತರವೇ ಎಲ್ಲಾ ಜನಾಂಗಗಳು ಆಶೀರ್ವಾದವನ್ನು ಪಡೆಯುವುವು,” ಎಂಬ ಶುಭವರ್ತಮಾನವನ್ನು
ಮುಂಚಿತವಾಗಿ ತಿಳಿಸಲಾಯಿತು. [9]ಹೀಗಿರಲಾಗಿ, ವಿಶ್ವಾಸದಿಂದ ಬಾಳುವವರು ವಿಶ್ವಾಸಿಯಾದ ಅಬ್ರಹಾಮನು
ಪಡೆದ ಸೌಭಾಗ್ಯವನ್ನೇ ಪಡೆಯುವರು.

10 ಧರ್ಮಶಾಸ್ತ್ರದ ವಿಧಿನಿಯಮಗಳನ್ನೇ ಆಧಾರವಾಗಿಟ್ಟುಕೊಂಡು ಬಾಳುವವರು ಶಾಪಗ್ರಸ್ತರು.
ಏಕೆಂದರೆ, “ಧರ್ಮಗ್ರಂಥದಲ್ಲಿ ಬರೆದಿರುವುದನ್ನೆಲ್ಲಾ ಅನುದಿನವೂ ಕೈಗೊಂಡು ನಡೆಯದ ಪ್ರತಿಯೊಬ್ಬನೂ
ಶಾಪಗ್ರಸ್ತನು,” ಎಂದು ಲಿಖಿತವಾಗಿದೆ. [11]ಇದಲ್ಲದೆ ಧರ್ಮಶಾಸ್ತ್ರ ವಿಧಿಸುವುದನ್ನು ಪೂರೈಸುವುದರಿಂದ
ಯಾರೂ ದೇವರೊಡನೆ ಸತ್ಸಂಬಂಧ ಪಡೆಯಲಾರರು ಎಂಬುದು ಸಹ ಸ್ಪಷ್ಟವಾಗಿದೆ. ಯಾಕೆಂದರೆ,
“ಯಾರು ದೇವರೊಡನೆ ಸತ್ಸಂಬಂಧವನ್ನು ಹೊಂದಿರುತ್ತಾರೋ ಅವರು ವಿಶ್ವಾಸದಿಂದಲೇ ಸಜ್ಜೀವವನ್ನು

ಪಡೆಯುತ್ತಾರೆ" ಎಂದು ಪವಿತ್ರ ಗ್ರಂಥದಲ್ಲೇ ಲಿಖಿತವಾಗಿದೆ. 12ಧರ್ಮಶಾಸ್ತ್ರ ವಿಶ್ವಾಸವನ್ನು ಆಧರಿಸಿಲ್ಲ.
ಬದಲಿಗೆ, "ಅದರ ವಿಧಿನಿಯಮಗಳನ್ನು ಪಾಲಿಸುವವನು ಅವುಗಳ ಮೂಲಕವಾಗಿ ಜೀವಿಸುತ್ತಾನೆ," ಎಂದು
ಬರೆಯಲಾಗಿದೆ.

13 "ಮರಕ್ಕೆ ತೂಗುಹಾಕಲಾದ ಪ್ರತಿ ಒಬ್ಬನೂ ಶಾಪಗ್ರಸ್ತನು," ಎಂದು ಬರೆದಿರುವಂತೆ,
ನಮಗೋಸ್ಕರ ಕ್ರಿಸ್ತಯೇಸು ಶಾಪ ಸ್ವರೂಪಿಯಾಗಿ ಧರ್ಮಶಾಸ್ತ್ರದಲ್ಲಿ ಹೇಳಲಾಗಿರುವ ಶಾಪದಿಂದ ನಮ್ಮನ್ನು
ಪಾರುಮಾಡಿದರು. 14ಇದರಿಂದಾಗಿ ಅಬ್ರಹಾಮನಿಗೆ ದೊರಕಿದ ಸೌಭಾಗ್ಯ, ಕ್ರಿಸ್ತಯೇಸುವಿನ ಮುಖಾಂತರ
ಅನ್ಯಧರ್ಮೀಯರಿಗೂ ದೊರಕುವಂತಾಯಿತು; ವಿಶ್ವಾಸದ ಮೂಲಕವಾಗಿ, ದೇವರು ವಾಗ್ದಾನ ಮಾಡಿದ
ಪವಿತ್ರಾತ್ಮ ನಮಗೂ ದೊರಕುವಂತಾಯಿತು.

### ರದ್ದಾಗದ ವಾಗ್ದಾನ

15 ಪ್ರಿಯ ಸಹೋದರರೇ, ದೈನಂದಿನ ಜೀವನದಿಂದ ಒಂದು ಉದಾಹಣೆಯನ್ನೇ
ತೆಗೆದುಕೊಳ್ಳೋಣ: ಒಬ್ಬನು ಮತ್ತೊಬ್ಬನೊಡನೆ ಒಂದು ಒಪ್ಪಂದ ಮಾಡಿಕೊಳ್ಳುತ್ತಾನೆ. ಕ್ರಮಬದ್ಧವಾಗಿ
ಅದನ್ನು ಮಾಡಿ ಮುಗಿಸಿದ ಮೇಲೆ ಯಾರೂ ಅದನ್ನು ರದ್ದುಮಾಡುವಂತಿಲ್ಲ, ಬದಲಾಯಿಸುವಂತಿಲ್ಲ.
16ಹಾಗೆಯೇ, ದೇವರು ಅಬ್ರಹಾಮನಿಗೂ ಆತನ ಸಂತತಿಗೂ ವಾಗ್ದಾನಗಳನ್ನು ಮಾಡಿದರು. "ನಿನ್ನ
ಸಂತತಿಗಳಿಗೆ" ಎಂದು ಹೇಳಿ ಅನೇಕರನ್ನು ಸೂಚಿಸಿದೆ, "ನಿನ್ನ ಸಂತತಿಗೆ" ಎಂದು ಹೇಳಿ ಒಬ್ಬ ವ್ಯಕ್ತಿಯನ್ನೇ
ಆ ವಾಗ್ದಾನದಲ್ಲಿ ಸೂಚಿಸಿದರು. ಆ ವ್ಯಕ್ತಿಯೇ ಕ್ರಿಸ್ತಯೇಸು. 17ದೇವರು ಅಬ್ರಹಾಮನೊಂದಿಗೆ
ಮಾಡಿಮುಗಿಸಿದ ಒಪ್ಪಂದವನ್ನು ನಾನೂರ ಮೂವತ್ತು ವರ್ಷಗಳಾದ ಮೇಲೆ ಬಂದ ಧರ್ಮಶಾಸ್ತ್ರದಿಂದ
ರದ್ದುಪಡಿಸಲಾಗದು; ಆ ವಾಗ್ದಾನವನ್ನು ವ್ಯರ್ಥಪಡಿಸಲಾಗದು. 18ದೇವರು ನಮಗೆ ಹಕ್ಕುಬಾಧ್ಯತೆಯಾಗಿ
ಕೊಡುವುದು ಧರ್ಮಶಾಸ್ತ್ರದಿಂದ ಲಭಿಸುವುದಾದರೆ ಅದು ಇನ್ನು ದೇವ ವಾಗ್ದಾನದಿಂದ ಲಭಿಸದು
ಎಂದಂತಾಯಿತು. ಆದರೆ ದೇವರು ಅದನ್ನು ಅಬ್ರಹಾಮನಿಗೆ ದಯಪಾಲಿಸಿದ್ದು ವಾಗ್ದಾನದ ಮೂಲಕವೇ.

19 ಹಾಗಾದರೆ ಧರ್ಮಶಾಸ್ತ್ರದ ಉದ್ದೇಶವಾದರೂ ಏನು? ಅಪರಾಧದ ಅರಿವನ್ನು
ಮೂಡಿಸುವುದಕ್ಕಾಗಿ ಅದನ್ನು ಕಾಲಕ್ರಮೇಣ ಸೇರಿಸಲಾಯಿತು. ದೇವವಾಗ್ದಾನವನ್ನು ಪಡೆದ ಆ ಸಂತತಿ
ಬರುವ ತನಕ ಮಾತ್ರ ಅದು ಇರಲೆಂದು ಕೊಡಲಾಯಿತು. ಅಲ್ಲದೆ, ಕೇವಲ ದೇವದೂತರ ಮುಖಾಂತರ,
ಒಬ್ಬ ಮಾನವ ಮಧ್ಯಸ್ಥನ ಮೂಲಕ ಮಾತ್ರ ಅದನ್ನು ನೀಡಲಾಯಿತು. 20ಒಂದೇ ಪಕ್ಷ ಇರುವಾಗ ಮಧ್ಯಸ್ಥನು
ಬೇಕಿಲ್ಲ, ದೇವರಾದರೋ ಒಬ್ಬರೇ.

### ಕ್ರಿಸ್ತೇಸುವಿಗೆ ಸೇರಿದವರು ವಾರಸುದಾರರು

21 ಹಾಗಾದರೆ, ಧರ್ಮಶಾಸ್ತ್ರ ದೇವರ ವಾಗ್ದಾನಕ್ಕೆ ವಿರುದ್ಧವಾಗಿದೆಯೆಂದು ಹೇಳೋಣವೇ?
ಎಂದಿಗೂ ಇಲ್ಲ. ಸಜ್ಜೀವಗೊಳಿಸುವ ಶಕ್ತಿಯನ್ನು ಧರ್ಮಶಾಸ್ತ್ರ ಹೊಂದಿದ್ದರೆ ಅದನ್ನು ಅನುಸರಿಸುವುದರಿಂದ
ನಿಸ್ಸಂದೇಹವಾಗಿ ದೇವರೊಡನೆ ಸತ್ಸಂಬಂಧ ದೊರಕುತ್ತಿತ್ತು. 22ಅದಕ್ಕೆ ಬದಲಾಗಿ ಸಮಸ್ತ ಲೋಕವೂ ಪಾಪಕ್ಕೆ
ಒಳಗಾಯಿತು ಎಂದು ಪವಿತ್ರಗ್ರಂಥ ಸ್ಪಷ್ಟೀಕರಿಸುತ್ತದೆ. ಹೀಗೆ, ವಾಗ್ದಾನ ಮಾಡಿದ ಸೌಭಾಗ್ಯವನ್ನು
ಯೇಸುಕ್ರಿಸ್ತರಲ್ಲಿ ವಿಶ್ವಾಸವಿಟ್ಟವರಿಗೆ ಅವರ ನಂಬಿಕೆಯ ಆಧಾರದ ಮೇಲೆ ಕೊಡಲಾಗುತ್ತದೆ.

23 ಕ್ರೈಸ್ತವಿಶ್ವಾಸದ ಕಾಲವು ಬರುವುದಕ್ಕೆ ಮೊದಲು ನಾವು ಧರ್ಮಶಾಸ್ತ್ರದ ನಿರ್ಬಂಧಕ್ಕೆ ಒಳಗಾಗಿ
ಕೈದಿಗಳಂತೆ ಇದ್ದೆವು. ಈ ವಿಶ್ವಾಸವು ಪ್ರಕಟವಾಗುವವರೆಗೂ ಇದೇ ಪರಿಸ್ಥಿತಿ ಇತ್ತು. 24ಅಂತೆಯೇ, ವಿಶ್ವಾಸದ
ಮೂಲಕ ನಾವು ದೇವರೊಡನೆ ಸತ್ಸಂಬಂಧ ಹೊಂದುವಂತೆ ಕ್ರಿಸ್ತಯೇಸು ಬರುವತನಕ ಅದು ನಮಗೆ
ಕಾವಲಾಗಿತ್ತು. 25ಈಗ ಕ್ರೈಸ್ತವಿಶ್ವಾಸವು ಆಗಮಿಸಿರುವುದರಿಂದ ಇನ್ನು ನಾವು ಧರ್ಮಶಾಸ್ತ್ರದ ಅಧೀನದಲ್ಲಿ
ಇಲ್ಲ.

26 ಕ್ರಿಸ್ತಯೇಸುವಿನಲ್ಲಿ ಇಟ್ಟಿರುವ ವಿಶ್ವಾಸದ ಮೂಲಕ ನೀವೆಲ್ಲರೂ ದೇವರ ಮಕ್ಕಳಾಗಿದ್ದೀರಿ.
27ಹೇಗೆಂದರೆ, ಕ್ರಿಸ್ತಯೇಸುವಿನಲ್ಲಿ ಒಂದಾಗುವುದಕ್ಕೆ ದೀಕ್ಷಾಸ್ನಾನ ಮಾಡಿಸಿಕೊಂಡಿರುವ ನೀವೆಲ್ಲರೂ
ಕ್ರಿಸ್ತಂಬರರಾಗಿದ್ದೀರಿ. 28ನೀವೆಲ್ಲರೂ ಕ್ರಿಸ್ತಯೇಸುವಿನಲ್ಲಿ ಒಂದಾಗಿದ್ದೀರಿ. ಎಂದೇ, ಇನ್ನು ಮೇಲೆ ಯೆಹೂದ್ಯ–

ಯೆಹೂದ್ಯನಲ್ಲದವ, ದಾಸ–ದಣಿ, ಗಂಡು–ಹೆಣ್ಣು ಎಂಬ ಭೇದವಿಲ್ಲ. 29ನೀವು ಕ್ರಿಸ್ತ ಯೇಸುವಿಗೆ
ಸೇರಿದವರಾಗಿದ್ದರೆ ಅಬ್ರಹಾಮನ ಸಂತತಿಯೂ ಆಗಿದ್ದೀರಿ; ದೈವ ವಾಗ್ದಾನದ ಪ್ರಕಾರ ವಾರಸುದಾರರೂ
ಆಗಿದ್ದೀರಿ.

### ಮನೆಯಾಳಲ್ಲ, ಮಗನೇ ಹೌದು

**4** ನಾನು ಮತ್ತೆ ಹೇಳುವುದೇನೆಂದರೆ: ವಾರಸುದಾರನು ತಂದೆಯ ಆಸ್ತಿಗೆಲ್ಲಾ ಹಕ್ಕುದಾರನಾಗಿದ್ದರೂ,
ಅವನು ಬಾಲಕನಾಗಿರುವ ತನಕ ಅವನಿಗೂ ಆಳಿಗೂ ವ್ಯತ್ಯಾಸವಿರುವುದಿಲ್ಲ. 2ತಂದೆ ಗೊತ್ತುಮಾಡಿದ
ದಿನದವರೆಗೂ ಅವನು ಪೋಷಕರ ಹಾಗೂ ಕಾರ್ಯನಿರ್ವಾಹಕರ ಕೈಕೆಳಗೆ ಇರುತ್ತಾನೆ. 3ನಮ್ಮ ಸ್ಥಿತಿಯೂ
ಹಾಗೆಯೇ ಇತ್ತು. ನಾವು ಬಾಲಕರಂತೆ ವಿಶ್ವದ ಮೂಲಭೂತ ಶಕ್ತಿಗಳಿಗೆ ಅಧೀನರಾಗಿದ್ದೆವು. 4–5ಕಾಲವು
ಪರಿಪಕ್ವವಾದಾಗ ದೇವರು ತಮ್ಮ ಪುತ್ರನನ್ನೇ ಕಳುಹಿಸಿಕೊಟ್ಟರು. ಇವರು ಧರ್ಮಶಾಸ್ತ್ರಕ್ಕೆ ಅಧೀನರಾದವರನ್ನು
ಬಿಡುಗಡೆ ಮಾಡುವುಕ್ಕಾಗಿಯೂ ದೇವಪುತ್ರರ ಪದವಿಯನ್ನು ನಮಗೆ ಒದಗಿಸಿಕೊಡುವುದಕ್ಕಾಗಿಯೂ ಒಬ್ಬ
ಸ್ತ್ರೀಯಲ್ಲಿ ಜನಿಸಿದರು. ಧರ್ಮಶಾಸ್ತ್ರಕ್ಕೆ ಅಧೀನರಾಗಿಯೇ ಹುಟ್ಟಿದರು.

6 ನೀವು ದೇವರ ಮಕ್ಕಳಾಗಿರುವುದರಿಂದಲೇ, "ಅಪ್ಪಾ, ತಂದೆಯೇ," ಎಂದು ಕರೆಯುವ ತಮ್ಮ
ಪುತ್ರನ ಆತ್ಮವನ್ನು ದೇವರು ನಮ್ಮ ಹೃದಯಗಳಿಗೆ ಕಳುಹಿಸಿದ್ದಾರೆ. 7ಆದ್ದರಿಂದ, ದೇವರ ಅನುಗ್ರಹದಿಂದಲೇ
ನೀನು ಇನ್ನು ಮನೆಯಾಳಲ್ಲ, ಮಗನಾಗಿದ್ದೀ. ಮಗನೆಂದಮೇಲೆ ನೀನು ವಾರಸುದಾರನೂ ಹೌದು.

### ಪೌಲನ ಕಳಕಳಿ

8 ಹಿಂದೆ ನೀವು ದೇವರನ್ನು ಅರಿಯದೆ ಇದ್ದಿರಿ. ದೇವರಲ್ಲದವುಗಳಿಗೆ ಅಧೀನರಾಗಿದ್ದಿರಿ.
9ಈಗಲಾದರೋ ನಿಜದೇವರನ್ನು ಅರಿತುಕೊಂಡಿದ್ದೀರಿ; ಸರಿಯಾಗಿ ಹೇಳಬೇಕಾದರೆ ದೇವರು ನಿಮ್ಮನ್ನು
ಅರಿತುಕೊಂಡಿದ್ದಾರೆ. ಹೀಗಿರಲಾಗಿ, ದುರ್ಬಲ ಹಾಗೂ ದರಿದ್ರವಾದ ಮೂಲಭೂತ ಶಕ್ತಿಗಳಿಗೆ ನೀವು
ಮರಳುವುದೇಕೆ? ಪುನಃ ಅವುಗಳಿಗೆ ಗುಲಾಮರಾಗಲು ಇಚ್ಛಿಸುವುದೇಕೆ? 10ನೀವು ಶುಭಾಶುಭ ದಿನಗಳನ್ನು,
ಮಾಸಗಳನ್ನು ಮತ್ತು ಸಂವತ್ಸರಗಳನ್ನು ಜಾಗರೂಕತೆಯಿಂದ ನೋಡುತ್ತೀರಿ. 11ನಿಮಗಾಗಿ ನಾನು ಪಟ್ಟ
ಪ್ರಯಾಸವೆಲ್ಲ ವ್ಯರ್ಥವಾಯಿತೇನೋ ಎಂಬ ಶಂಕೆ ನನ್ನನ್ನು ಕಾಡುತ್ತಿದೆ.

12 ಪ್ರಿಯ ಸಹೋದರರೇ, ನಾನು ನಿಮ್ಮಂತೆ ಆದಹಾಗೆ, ನೀವೂ ನನ್ನಂತೆ ಆಗಬೇಕೆಂದು
ಕಳಕಳಿಯಿಂದ ಕೇಳಿಕೊಳ್ಳುತ್ತೇನೆ. ನೀವು ನನಗೆ ಯಾವ ಅನ್ಯಾಯವನ್ನೂ ಮಾಡಿಲ್ಲ. 13ನಾನು
ಅಸ್ವಸ್ಥನಾಗಿದ್ದುದರಿಂದ ನಿಮ್ಮಲ್ಲೇ ಇದ್ದು ಮೊತ್ತಮೊದಲ ಬಾರಿಗೆ ಶುಭಸಂದೇಶವನ್ನು ನಿಮಗೆ ಸಾರಲು
ಆಸ್ಪದವಾಯಿತು. ಇದನ್ನು ನೀವು ಬಲ್ಲಿರಿ. 14ನನ್ನ ದೇಹಸ್ಥಿತಿ ನಿಮಗೆ ಬೇಸರವನ್ನುಂಟು
ಮಾಡುವಂಥದ್ದಾಗಿದ್ದರೂ ನೀವು ನನ್ನನ್ನು ತಿರಸ್ಕರಿಸಲಿಲ್ಲ; ಅಸಹ್ಯಪಡಲಿಲ್ಲ. ನನ್ನನ್ನು ದೇವದೂತನಂತೆ ಏಕೆ,
ಕ್ರಿಸ್ತಯೇಸುವಿನಂತೆಯೇ ಭಾವಿಸಿ ಉಪಚರಿಸಿದಿರಿ. 15ಅದೊಂದು ಭಾಗ್ಯವೆಂದೇ ತಿಳಿದಿರಿ. ಆ ಭಾವನೆ
ಈಗೆಲ್ಲಿದೆ? ಆಗ, ಬೇಕಾಗಿದ್ದಿದ್ದರೆ ನಿಮ್ಮ ಕಣ್ಣುಗಳನ್ನೇ ಕಿತ್ತು ನನಗೆ ಕೊಡುತ್ತಿದ್ದಿರಿ ಎಂದು ನಾನು ಹೇಳಬಲ್ಲೆ!
16ಹೀಗಿರಲಾಗಿ ಸತ್ಯವನ್ನು ನುಡಿಯುವುದರಿಂದ ನಾನು ನಿಮಗೆ ಶತ್ರುವಾಗಿ ಬಿಟ್ಟೆನೇ?

17 ಆ ನನ್ನ ವಿರೋಧಿಗಳು ನಿಮ್ಮನ್ನು ಮೆಚ್ಚಿಸಲು ತುಂಬ ಆಸಕ್ತಿಯನ್ನು ತೋರಿಸುತ್ತಿದ್ದಾರೆ. ಆದರೆ
ಅವರ ಉದ್ದೇಶ ಒಳ್ಳೆಯದಲ್ಲ. ನೀವು ಸಹ ಅವರನ್ನು ಅಷ್ಟೇ ಆಸಕ್ತಿಯಿಂದ ಮೆಚ್ಚಿಸಬೇಕೆಂಬುದೇ ಅವರ
ಉದ್ದೇಶ. ಆದ್ದರಿಂದಲೇ ನಿಮ್ಮನ್ನು ನನ್ನಿಂದ ಬೇರ್ಪಡಿಸಲು ಯತ್ನಿಸುತ್ತಿದ್ದಾರೆ. 18ನಾನು ನಿಮ್ಮ ಬಳಿ ಇರಲಿ,
ಇಲ್ಲದಿರಲಿ, ಬೇರೆಯವರು ನಿಮ್ಮಲ್ಲಿ ಅಷ್ಟು ಆಸಕ್ತರಾಗಿರುವುದು ಒಳ್ಳೆಯದೇ. ಆದರೆ ಅಂಥ ಆಸಕ್ತಿ
ಸದುದ್ದೇಶದಿಂದ ಕೂಡಿರಬೇಕು. 19ನನ್ನ ಪ್ರಿಯ ಮಕ್ಕಳೇ, ತಾಯಿ ತನ್ನ ಮಗುವಿಗಾಗಿ ಪ್ರಸವ ವೇದನೆಪಡುವ
ಪ್ರಕಾರ ಕ್ರಿಸ್ತಯೇಸು ನಿಮ್ಮಲ್ಲಿ ರೂಪುಗೊಳ್ಳುವ ತನಕ ನಿಮಗಾಗಿ ನಾನು ಮತ್ತೆ ಅಂಥ ವೇದನೆಯನ್ನು
ಪಡುತ್ತಿದ್ದೇನೆ. 20ನಿಮ್ಮ ವಿಷಯದಲ್ಲಿ ಏನು ಮಾಡಬೇಕೋ ನನಗೆ ತೋಚುತ್ತಿಲ್ಲ. ಬಹುಶಃ ನೇರವಾಗಿ ನಿಮ್ಮ

ಬಳಿಗೆ ಬಂದು, ನಿಮ್ಮ ಮಧ್ಯದಲ್ಲೇ ಇದ್ದು ನನ್ನ ಮಾತಿನ ವೈಖರಿಯನ್ನು ಬದಲಾಯಿಸಿದ್ದರೆ ಚೆನ್ನಾಗಿರುತ್ತಿತ್ತೇನೋ!

### ದಾಸಿಯ ಮಕ್ಕಳಲ್ಲ, ಧರ್ಮಪತ್ನಿಯ ಮಕ್ಕಳು

21 ಧರ್ಮಶಾಸ್ತ್ರಕ್ಕೆ ಅಧೀನರಾಗಲು ಆಶಿಸುವವರೇ, ನನಗೆ ಉತ್ತರ ಕೊಡಿ: ಅದೇ ಧರ್ಮಶಾಸ್ತ್ರ
ಹೇಳುವುದನ್ನು ನೀವು ಕೇಳಿಲ್ಲವೇ? 22ಅಬ್ರಹಾಮನಿಗೆ ಇಬ್ಬರು ಮಕ್ಕಳಿದ್ದರು: ಒಬ್ಬನು ದಾಸಿಯಿಂದ
ಹುಟ್ಟಿದವನು; ಇನ್ನೊಬ್ಬನು ಧರ್ಮಪತ್ನಿಯಿಂದ ಹುಟ್ಟಿದವನು. 23ದಾಸಿಯ ಮಗ ಪ್ರಕೃತಿ ಸಹಜವಾಗಿ
ಹುಟ್ಟಿದವನು; ಧರ್ಮಪತ್ನಿಯ ಮಗನಾದರೋ ವಾಗ್ದಾನದ ಫಲವಾಗಿ ಹುಟ್ಟಿದವನು. 24ಇದೊಂದು
ಅಲಂಕಾರ ರೂಪ. ಆ ಇಬ್ಬರು ಸ್ತ್ರೀಯರು ಎರಡು ಒಡಂಬಡಿಕೆಗಳಿಗೆ ಸದೃಶ್ಯರಾಗಿದ್ದಾರೆ. ಒಂದು,
ಸೀನಾಯ್ ಪರ್ವತದಲ್ಲಿ ಮಾಡಲಾದ ಒಡಂಬಡಿಕೆ; ಅದು ದಾಸತ್ವಕ್ಕೆ ಮಕ್ಕಳನ್ನು ಹೆರುತ್ತದೆ. ಅದನ್ನು
ಸೂಚಿಸುವವಳೇ ದಾಸಿ ಹಾಗರಳು. 25ಅರೇಬಿಯಾದಲ್ಲಿರುವ ಸೀನಾಯ್ ಪರ್ವತವನ್ನು ಪ್ರತಿನಿಧಿಸುವ ಈ
ಹಾಗರಳು ಈಗಿನ ಜೆರುಸಲೇಮ್ ನಗರವನ್ನು ಹೋಲುತ್ತಾಳೆ. ಹೇಗೆಂದರೆ, ಜೆರುಸಲೇಮ್ ತನ್ನ ಮಕ್ಕಳ
ಸಮೇತವಾಗಿ ದಾಸತ್ವದಲ್ಲಿ ಇದೆ. 26ಆದರೆ ಸ್ವರ್ಗೀಯ ಜೆರುಸಲೇಮ್ ದಾಸಿ ಅಲ್ಲ, ಸ್ವತಂತ್ರಳು, ಈಕೆಯೇ
ನಮ್ಮ ತಾಯಿ.
27 "ಸಂತಾನವಿಲ್ಲದ ಸ್ತ್ರೀಯೇ, ಸಂತೋಷಿಸು
ಪ್ರಸವ ವೇದನೆಯನರಿಯದವಳೇ,
ಹರ್ಷೋದ್ಗಾರಮಾಡು
ಗಂಡನುಳ್ಳವಳಿಗಿಂತ ಕೈ ಬಿಟ್ಟವಳ
ಸಂತಾನ ಹೆಚ್ಚು,"
ಎಂದು ಪವಿತ್ರಗ್ರಂಥದಲ್ಲೇ ಲಿಖಿತವಾಗಿದೆ.
28 ಆದ್ದರಿಂದ ಪ್ರಿಯ ಸಹೋದರರೇ, ನೀವು ಇಸಾಕನಂತೆ ವಾಗ್ದಾನದ ಫಲವಾಗಿ ಹುಟ್ಟಿದ
ಮಕ್ಕಳು. 29ಅಂದು ಪ್ರಕೃತಿಸಹಜವಾಗಿ ಹುಟ್ಟಿದವನು ದೇವರಾತ್ಮದಿಂದ ಹುಟ್ಟಿದವನನ್ನು ಹಿಂಸೆಪಡಿಸಿದಂತೆ
ಇಂದೂ ನಡೆಯುತ್ತದೆ. 30ಪವಿತ್ರಗ್ರಂಥ ಹೇಳುವುದಾದರೂ ಏನು?
"ದಾಸಿಯನ್ನೂ ಅವಳ ಮಗನನ್ನೂ
ಹೊರಕ್ಕೆ ದೂಡು;
ದಾಸಿಯ ಮಗನು ಧರ್ಮಪತ್ನಿಯ
ಮಗನೊಂದಿಗೆ
ಪಾಲುಗಾರನಾಗಕೂಡದು,"
ಎಂದಲ್ಲವೇ? 31ಹೌದು, ಪ್ರಿಯ ಸಹೋದರರೇ, ನಾವು ದಾಸಿಯ ಮಕ್ಕಳಲ್ಲ, ಧರ್ಮಪತ್ನಿಯ ಮಕ್ಕಳು.

### ಸ್ವಾತಂತ್ರ್ಯವನ್ನು ಸದುಪಯೋಗಿಸಿಕೊಳ್ಳಿ

**5** ನಾವು ಮುಕ್ತ ಸ್ವಾತಂತ್ರ್ಯದಿಂದ ಬಾಳಬೇಕೆಂದು ಕ್ರಿಸ್ತಯೇಸು ನಮ್ಮನ್ನು ಬಿಡುಗಡೆ ಮಾಡಿದರು. ಆದ್ದರಿಂದ
ದೃಢವಾಗಿರಿ. ಗುಲಾಮಗಿರಿಯ ನೊಗಕ್ಕೆ ಪುನಃ ಕೊರಳನ್ನು ಒಡ್ಡದಿರಿ.
2 ಪೌಲನಾದ ನಾನು ಹೇಳುವುದನ್ನು ಕೇಳಿ: ನೀವು ಸುನ್ನತಿ ಮಾಡಿಸಿಕೊಂಡರೆ ಕ್ರಿಸ್ತ ಯೇಸುವಿನಿಂದ
ನಿಮಗೆ ಯಾವ ಪ್ರಯೋಜನವೂ ಆಗುವುದಿಲ್ಲ. 3ಸುನ್ನತಿ ಮಾಡಿಸಿಕೊಳ್ಳುವ ಪ್ರತಿಯೊಬ್ಬನೂ ಇಡೀ
ಧರ್ಮಶಾಸ್ತ್ರದ ವಿಧಿನಿಯಮಗಳನ್ನು ಅನುಸರಿಸಲು ಬದ್ಧನಾಗಿದ್ದಾನೆ ಎಂದು ಪುನಃ ನಿಮಗೆ ನಾನು ಒತ್ತಿ
ಹೇಳುತ್ತೇನೆ. 4ಧರ್ಮಶಾಸ್ತ್ರದ ವಿಧಿನಿಯಮಗಳನ್ನು ಅನುಸರಿಸುವುದರ ಮೂಲಕವೇ ದೇವರೊಡನೆ
ಸತ್ಸಂಬಂಧ ಪಡೆಯಬೇಕೆಂದಿರುವ ನೀವು ಕ್ರಿಸ್ತಯೇಸುವಿನಿಂದ ಬೇರ್ಪಟ್ಟಿದ್ದೀರಿ. ದೈವಾನುಗ್ರಹದಿಂದ
ದೂರವಾಗಿದ್ದೀರಿ. 5ನಾವಾದರೋ ಪವಿತ್ರಾತ್ಮರ ಮುಖಾಂತರ ವಿಶ್ವಾಸದಿಂದ ದೇವರೊಂದಿಗೆ
ಸತ್ಸಂಬಂಧವನ್ನು ಹೊಂದುತ್ತೇವೆಂಬ ನಿರೀಕ್ಷೆ ಉಳ್ಳವರಾಗಿದ್ದೇವೆ; ಈ ನಿರೀಕ್ಷೆ ಸಫಲವಾಗುವುದನ್ನು

ಎದುರುನೋಡುತ್ತಿದ್ದೇವೆ. [6]ಕ್ರಿಸ್ತ ಯೇಸುವಿನಲ್ಲಿ ಬಾಳುವವರಿಗೆ ಸುನ್ನತಿ ಮಾಡಿಸಿಕೊಳ್ಳುವುದೋ ಅಥವಾ ಮಾಡಿಸಿಕೊಳ್ಳದಿರುವುದೋ ಮುಖ್ಯವಲ್ಲ. ಪ್ರೀತಿಯಿಂದ ಕಾರ್ಯ ಎಸಗುವ ವಿಶ್ವಾಸವೇ ಪ್ರಮುಖವಾದುದು.

7 ಇದುವರೆಗೂ ನಿಮ್ಮ ಬದುಕಿನ ಓಟ ಚೆನ್ನಾಗಿ ಸಾಗುತ್ತಿತ್ತು. ಸತ್ಯಕ್ಕೆ ಶರಣರಾಗದಂತೆ ಈಗ ನಿಮ್ಮನ್ನು ತಡೆದವರು ಯಾರು? [8]ಹಾಗೆ ಅಡ್ಡಿ ಮಾಡಿದವರು, ನಿಮ್ಮನ್ನು ಕರೆದ ದೇವರೇನೂ ಅಲ್ಲ. [9]ಒಂದಿಷ್ಟು ಹುಳಿ ಸಾಕು, ಹಿಟ್ಟನ್ನೆಲ್ಲಾ ಹುದುಗೆಬ್ಬಿಸಲು! [10]ಭಿನ್ನಾಭಿಪ್ರಾಯಗಳಿಗೆ ನೀವು ಮಣಿಯುವುದಿಲ್ಲವೆಂದು ನಿಮ್ಮನ್ನು ಕುರಿತು ಪ್ರಭುವಿನಲ್ಲಿ ನನಗೆ ದೃಢವಾದ ನಂಬಿಕೆ ಇದೆ. ನಿಮ್ಮಲ್ಲಿ ಗೊಂದಲ ಎಬ್ಬಿಸುವವನು ಯಾರೇ ಆಗಿರಲಿ, ಅವನು ದೈವ ದಂಡನೆಗೆ ಗುರಿಯಾಗುತ್ತಾನೆ.

11 ಸಹೋದರರೇ, ಸುನ್ನತಿಮಾಡಿಸಿಕೊಳ್ಳುವುದು ಅವಶ್ಯಕವೆಂದು ನಾನು ಇನ್ನೂ ಬೋಧಿಸುತ್ತಿರುವುದಾಗಿ ಕೆಲವರು ಹೇಳುತ್ತಿದ್ದಾರಲ್ಲವೇ? ಹಾಗೆ ಬೋಧಿಸುತ್ತಿರುವುದಾದರೆ ನಾನೇಕೆ ಹೀಗೆ ಹಿಂಸೆಬಾಧೆಗಳನ್ನು ಅನುಭವಿಸಬೇಕಾಗುತ್ತಿತ್ತು? ನಾನು ಹಾಗೇನಾದರೂ ಬೋಧಿಸಿದ್ದರೆ, ಶಿಲುಬೆಯ ಸಂದೇಶದಿಂದ ಯಾವ ಅಡ್ಡಿ ಆತಂಕವೂ ಉಂಟಾಗುತ್ತಿರಲಿಲ್ಲ. [12]ನಿಮಗೆ ಕಿರುಕುಳ ಕೊಡುತ್ತಿರುವವರು ತಮ್ಮ ಅಂಗಚ್ಛೇದವನ್ನಾದರೂ ಮಾಡಿಕೊಂಡರೆ ಲೇಸು.

13 ಸಹೋದರರೇ, ನೀವು ಮುಕ್ತ ಸ್ವತಂತ್ರ ಜೀವನವನ್ನು ನಡೆಸಬೇಕೆಂದು ದೇವರು ನಿಮ್ಮನ್ನು ಕರೆದಿದ್ದಾರೆ. ಆದರೆ, ಆ ಸ್ವಾತಂತ್ರ್ಯವನ್ನು ದೈಹಿಕ ಬಯಕೆಗಳಿಗೆ ಸಾಧನವಾಗಿ ಮಾಡಿಕೊಳ್ಳಬೇಡಿ. ಬದಲಾಗಿ, ನೀವು ಒಬ್ಬರಿಗೊಬ್ಬರು ಪ್ರೀತಿಯಿಂದ ಸೇವೆಮಾಡಿರಿ. [14]"ನೀನು ನಿನ್ನನ್ನೇ ಪ್ರೀತಿಸಿಕೊಳ್ಳುವಂತೆ ನಿನ್ನ ನೆರೆಯವರನ್ನು ಪ್ರೀತಿಸು," ಎಂಬ ಒಂದೇ ವಚನದಲ್ಲಿ ಇಡೀ ಧರ್ಮಶಾಸ್ತ್ರವು ಅಡಗಿದೆ. [15]ಆದರೆ ನೀವು ನಿಮ್ಮ ಕಚ್ಚಾಟ, ಕಿತ್ತಾಟ, ನುಂಗಾಟ – ಇವುಗಳನ್ನು ನಿಲ್ಲಿಸದಿದ್ದರೆ ಒಬ್ಬರಿಂದೊಬ್ಬರು ವಿನಾಶವಾದೀರಿ, ಎಚ್ಚರಿಕೆ!

**ಪವಿತ್ರಾತ್ಮದತ್ತವಾದ ಸತ್ಫಲಗಳು ಹಾಗೂ ದೇಹದ ದುಷ್ಫಲಗಳು**

16 ನಾನು ಹೇಳುವುದೇನೆಂದರೆ: ನೀವು ಪವಿತ್ರಾತ್ಮರ ಪ್ರೇರಣೆಗನುಸಾರವಾಗಿ ನಡೆದುಕೊಳ್ಳಬೇಕು. ಆಗ, ದೈಹಿಕ ವ್ಯಾಮೋಹಕ್ಕೆ ನೀವು ಈಡಾಗಲಾರಿರಿ. [17]ಏಕೆಂದರೆ, ದೈಹಿಕ ವ್ಯಾಮೋಹವು ಪವಿತ್ರಾತ್ಮರಿಗೆ ವಿರುದ್ಧವಾಗಿದೆ. ಪವಿತ್ರಾತ್ಮ ಆ ವ್ಯಾಮೋಹಕ್ಕೆ ವಿರುದ್ಧವಾಗಿದ್ದಾರೆ. ಇವೆರಡೂ ಒಂದಕ್ಕೊಂದು ಕಾದಾಡುವುದರಿಂದ ನಿಮ್ಮ ಬಯಕೆ ಕೈಗೂಡುವುದಿಲ್ಲ. [18]ನೀವು ಪವಿತ್ರಾತ್ಮ ನಡೆಸುವ ಮಾರ್ಗದಲ್ಲಿ ನಡೆಯುವವರಾದರೆ, ಧರ್ಮಶಾಸ್ತ್ರದ ವಿಧಿನಿಯಮಗಳಿಗೆ ನೀವು ಅಧೀನರಲ್ಲ. [19]ದೈಹಿಕ ವ್ಯಾಮೋಹದ ದುಷ್ಪರಿಣಾಮಗಳು ತಿಳಿದೇ ಇವೆ: ಹಾದರ, ಅಶುದ್ಧತೆ, ಕಾಮುಕತನ, [20]ವಿಗ್ರಹಾರಾಧನೆ, ಮಾಟಮಂತ್ರ, ಹಗೆತನ, ಜಗಳ, ಹೊಟ್ಟೆಕಿಚ್ಚು, ಕ್ರೋಧ, ಸ್ವಾರ್ಥಭೇದ, ಪಕ್ಷಪಾತ, ಮತ್ಸರ, ಕುಡುಕತನ, ದುಂದೌತಣ – ಇತ್ಯಾದಿಗಳು. [21]ಇಂಥ ಕೃತ್ಯಗಳನ್ನು ಮಾಡುವವರು ದೇವರ ಸಾಮ್ರಾಜ್ಯಕ್ಕೆ ಬಾಧ್ಯರಲ್ಲ ಎಂದು ಈಗಾಗಲೇ ನಿಮ್ಮನ್ನು ಎಚ್ಚರಿಸಿದ್ದೇನೆ; ಈಗಲೂ ಎಚ್ಚರಿಸುತ್ತೇನೆ.

22 ಪವಿತ್ರಾತ್ಮದತ್ತವಾದ ಸತ್ಫಲಗಳು ಯಾವುದೆಂದರೆ: ಪ್ರೀತಿ, ಆನಂದ, ಶಾಂತಿಸಮಾಧಾನ, ಸಹನೆ, ದಯೆ, ಸದ್ಗುಣ, ಪ್ರಾಮಾಣಿಕತೆ, ಸೌಜನ್ಯ, ಸಂಯಮ – ಇಂಥವುಗಳೇ. [23]ಇವುಗಳನ್ನು ಯಾವ ಧರ್ಮಶಾಸ್ತ್ರವೂ ಆಕ್ಷೇಪಿಸುವುದಿಲ್ಲ. [24]ಕ್ರಿಸ್ತಯೇಸುವಿಗೆ ಸೇರಿದ ಎಲ್ಲರೂ ತಮ್ಮ ದೈಹಿಕ ವ್ಯಾಮೋಹವನ್ನು, ಅದರ ಆಶಾಪಾಶಗಳ ಹಾಗೂ ದುರಿಚ್ಛೆಗಳ ಸಮೇತ ಶಿಲುಬೆಗೆ ಜಡಿದುಬಿಟ್ಟಿದ್ದಾರೆ. [25]ಪವಿತ್ರಾತ್ಮ ನಮ್ಮ ಜೀವಾಳವಾಗಿದ್ದರೆ, ಅವರೇ ನಮ್ಮ ಜೀವನದ ಮಾರ್ಗದರ್ಶಿಯೂ ಆಗಿರಬೇಕು. [26]ನಾವು ಅಹಂಕಾರಿಗಳಾಗಿರಬಾರದು; ಒಬ್ಬರನ್ನೊಬ್ಬರು ಕೆಣಕಬಾರದು; ಒಬ್ಬರ ಮೇಲೊಬ್ಬರು ಹೊಟ್ಟೆಕಿಚ್ಚು ಪಡಬಾರದು.

## ಸತ್ಕಾರ್ಯಗಳಿಂದ ಸತ್ಫಲ

**6** ಸಹೋದರರೇ, ನಿಮ್ಮಲ್ಲಿ ಯಾರಾದರೂ ತಪ್ಪಿತಸ್ಥರಾಗಿದ್ದರೆ, ಆಧ್ಯಾತ್ಮಿಕ ಜೀವಿಗಳಾದ ನೀವು
ಅಂಥವನನ್ನು ನಯವಿನಯದಿಂದ ತಿದ್ದಿ ಸರಿಯಾದ ದಾರಿಗೆ ತರಬೇಕು. ಆದರೆ ನೀನೂ ಅವನಂತೆ
ಪಾಪಪ್ರಚೋದನೆಗೆ ಒಳಗಾಗದಂತೆ ಎಚ್ಚರಿಕೆಯಿಂದಿರಬೇಕು. 2ಒಬ್ಬರ ಭಾರವನ್ನು ಒಬ್ಬರು ಹೊತ್ತುಕೊಳ್ಳಿ.
ಹೀಗೆ ಕ್ರಿಸ್ತಯೇಸುವಿನ ನಿಯಮವನ್ನು ನೆರವೇರಿಸುವಿರಿ. 3ಅಲ್ಪನು ತಾನು ಶ್ರೇಷ್ಠನೆಂದು ಭಾವಿಸಿಕೊಂಡರೆ
ತನ್ನನ್ನು ತಾನೇ ವಂಚಿಸಿಕೊಳ್ಳುತ್ತಾನೆ, ಅಷ್ಟೆ. 4ಪ್ರತಿಯೊಬ್ಬನೂ ತನ್ನ ನಡತೆಯನ್ನು ತನ್ನಷ್ಟಕ್ಕೆ ತಾನೇ
ಪರಿಶೋಧಿಸಿಕೊಳ್ಳಲಿ. ತನ್ನ ನಡತೆ ಒಳಿತಾಗಿದ್ದರೆ ಹೆಮ್ಮೆಪಡಲಿ. ಆದರೆ ಇತರರೊಂದಿಗೆ ಹೋಲಿಸಿ
ಹೆಮ್ಮೆಪಡಬೇಕಾಗಿಲ್ಲ. 5ಪ್ರತಿಯೊಬ್ಬನೂ ತನ್ನ ಹೊರೆಯನ್ನು ತಾನೇ ಹೊತ್ತುಕೊಳ್ಳಬೇಕು.

6 ದೇವರ ವಾಕ್ಯದ ಉಪದೇಶ ಪಡೆಯುವವನು ಉಪದೇಶ ಮಾಡುವವನೊಂದಿಗೆ ತನಗೆ ಇರುವ ಒಳ್ಳೆಯದನ್ನೆಲ್ಲಾ ಹಂಚಿಕೊಳ್ಳಲಿ.

7 ಮೋಸಹೋಗದಿರಿ, ದೇವರನ್ನು ವಂಚಿಸಬಹುದೆಂದು ಭಾವಿಸದಿರಿ; ಬಿತ್ತುವುದನ್ನೇ ಕೊಯ್ಯುತ್ತೇವೆ
ಎಂಬುದನ್ನು ನೆನಪಿನಲ್ಲಿಡಿ. 8ದೈಹಿಕ ವ್ಯಾಮೋಹವೆಂಬ ಸ್ವಭಾವದಲ್ಲಿ ಬಿತ್ತುವವನು ನಾಶವೆಂಬ ಫಲವನ್ನು
ಕೊಯ್ಯುತ್ತಾನೆ. ಪವಿತ್ರಾತ್ಮ ಸ್ವಭಾವದಲ್ಲಿ ಬಿತ್ತುವವನು ಆತ್ಮದಿಂದ ನಿತ್ಯಜೀವವೆಂಬ ಫಲವನ್ನು ಕೊಯ್ಯುತ್ತಾನೆ.
9ಸತ್ಕಾರ್ಯಗಳನ್ನು ಮಾಡುವುದರಲ್ಲಿ ಬೇಸರಪಡದಿರೋಣ. ಎದೆಗುಂದದಿರೋಣ; ಆಗ ಸೂಕ್ತಕಾಲದಲ್ಲಿ
ಸತ್ಫಲವನ್ನು ಕೊಯ್ಯುವೆವು. 10ಎಂದೇ ಸಮಯ ಸಂದರ್ಭಗಳು ಇರುವಾಗಲೇ ಸರ್ವರಿಗೂ
ಉಪಕಾರಮಾಡೋಣ. ಅದರಲ್ಲೂ ಮುಖ್ಯವಾಗಿ, ಒಂದೇ ಕುಟುಂಬದವರಂತೆ ಇರುವ ಕ್ರೈಸ್ತವಿಶ್ವಾಸಿಗಳಿಗೆ
ಉಪಕಾರ ಮಾಡೋಣ.

## ಶಿಲುಬೆಯ ಮಹತ್ವ

11 ಈ ದೊಡ್ಡದೊಡ್ಡ ಅಕ್ಷರಗಳನ್ನು ನೋಡಿರಿ: ಇವನ್ನು ನನ್ನ ಸ್ವಂತ ಕೈಯಿಂದಲೇ ಬರೆಯುತ್ತಿದ್ದೇನೆ.
12ಬಾಹ್ಯಾಚಾರಗಳಿಂದ ತಾವು ಒಳ್ಳೆಯವರು ಎನಿಸಿಕೊಳ್ಳಬೇಕೆನ್ನುವವರು ನೀವು ಸುನ್ನತಿ
ಮಾಡಿಸಿಕೊಳ್ಳಬೇಕೆಂದು ಬಲಾತ್ಕಾರ ಮಾಡುತ್ತಿದ್ದಾರೆ. ಕ್ರಿಸ್ತಯೇಸುವಿನ ಶಿಲುಬೆಯ ನಿಮಿತ್ತ ತಮಗೆ
ಹಿಂಸೆಬಾಧೆಗಳು ಉಂಟಾಗಬಾರದು ಎಂಬುದೇ ಅವರ ಉದ್ದೇಶವಾಗಿದೆ. 13ಸುನ್ನತಿ ಮಾಡಿಸಿಕೊಳ್ಳುವ
ತಾವಾದರೂ ಧರ್ಮಶಾಸ್ತ್ರವನ್ನು ಅನುಸರಿಸಿ ನಡೆಯುವುದಿಲ್ಲ. ಆದರೆ ನಿಮ್ಮ ದೈಹಿಕ ಸುನ್ನತಿಯಿಂದ, ಅವರು
ಹೆಚ್ಚಳಿಕೆ ಗಳಿಸುವುದಕ್ಕಾಗಿ ನಿಮಗೆ ಸುನ್ನತಿಯಾಗಬೇಕೆಂದು ಬಯಸುತ್ತಾರೆ. 14ನನಗಾದರೋ ನಮ್ಮ ಪ್ರಭು
ಯೇಸುಕ್ರಿಸ್ತರ ಶಿಲುಬೆಯನ್ನು ಬಿಟ್ಟು ಬೇರಾವುದರಲ್ಲೂ ಹೆಚ್ಚಳಪಡುವುದು ಬೇಡವೇ ಬೇಡ. ಆ ಶಿಲುಬೆಯ
ಮೂಲಕ, ನನ್ನ ಪಾಲಿಗೆ ಲೋಕವೇ ಶಿಲುಬೆಗೆ ಜಡಿಸಿಕೊಂಡು ಸತ್ತಿದೆ; ನಾನೂ ಸಹ ಲೋಕದ ಪಾಲಿಗೆ
ಶಿಲುಬೆಗೆ ಜಡಿಸಿಕೊಂಡು ಸತ್ತಿದ್ದೇನೆ. 15ಸುನ್ನತಿ ಮಾಡಿಸಿಕೊಳ್ಳುವುದೋ, ಮಾಡಿಸಿಕೊಳ್ಳದಿರುವುದೋ
ಮಹತ್ತಾದುದಲ್ಲ. ಹೊಸ ಸೃಷ್ಟಿಯಾಗುವುದೇ ಮಹತ್ತರವಾದುದು. 16ಈ ನಿಯಮವನ್ನು ಅನುಸರಿಸುವ
ಎಲ್ಲರಿಗೂ, ಅಂದರೆ ನಿಜ ಇಸ್ರಯೇಲರಾದ ದೇವಜನರೆಲ್ಲರಿಗೂ ಶಾಂತಿ ಸಮಾಧಾನವೂ
ಕೃಪಾಶೀರ್ವಾದವೂ ಲಭಿಸಲಿ!

17 ಇನ್ನು ಮೇಲೆ ಯಾರೂ ನನಗೆ ತೊಂದರೆ ಕೊಡದಿರಲಿ. ಯೇಸುವಿನ ದಾಸನೆಂದು ಸೂಚಿಸುವ ಕೆಂಗುರುತುಗಳು ನನ್ನ ದೇಹದಲ್ಲಿ ಮುದ್ರಿತವಾಗಿವೆ.

18 ಸಹೋದರರೇ, ನಮ್ಮ ಪ್ರಭು ಯೇಸುಕ್ರಿಸ್ತರ ಅನುಗ್ರಹ ನಿಮ್ಮೊಡನೆ ಇರಲಿ! ಆಮೆನ್.